ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಶಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE 5/2/20

# ದಾಸೋಹಕ್ಕೆ ಕೊಕ್ಕೆ

## ಸಿದ್ಧಗಂಗಾ ಸೇರಿ ಮಠ-ಸಂಸ್ಥೆಗಳ ಅನುದಾನ ಸ್ಥಗಿತ
## ಎಚ್ಚೆತ್ತ ಸರ್ಕಾರದಿಂದ 18 ಕೋಟಿ ರೂ. ಬಿಡುಗಡೆ

ಬೆಂಗಳೂರು: ಕಳೆದ ಮೂರು ತಿಂಗಳಿಂದ ಸ್ಥಗಿತವಾಗಿದ್ದ ದಾಸೋಹ ಯೋಜನೆಗೆ ರಾಜ್ಯ ಸರ್ಕಾರ ತತ್‌ಕ್ಷಣವೇ 18 ಕೋಟಿ ರೂ. ಅನುದಾನ ಬಿಡುಗಡೆ ಮಾಡಿದೆ.

ಮಠ-ಮಾನ್ಯಗಳು, ಇತರೆ ಧಾರ್ಮಿಕ ಕೇಂದ್ರಗಳು ಸೇರಿದಂತೆ ಖಾಸಗಿ ಸಂಘ-ಸಂಸ್ಥೆಗಳು ನಡೆಸುತ್ತಿದ್ದ ವೃದ್ಧಾಶ್ರಮ, ಅನಾಥಾಶ್ರಮ, ನಾರಿನಿಕೇತನ, ಹಾಸ್ಟೆಲ್‌ಗಳು, ನಿರಾಶ್ರಿತರು, ಭಿಕ್ಷುಕರ ಕೇಂದ್ರಗಳಲ್ಲಿ ಆಶ್ರಯ ಪಡೆದವರಿಗಾಗಿ ಉಚಿತವಾಗಿ ಅಕ್ಕಿ ಮತ್ತು ಗೋಧಿ ನೀಡುವ 'ದಾಸೋಹ' ಯೋಜನೆಗೆ ಕಳೆದ ಮೂರು ತಿಂಗಳಿಂದ ಅನುದಾನ ಬಿಡುಗಡೆಯಾಗಿರಲಿಲ್ಲ.

ಈ ವಿಚಾರ ಬೆಳಕಿಗೆ ಬರುತ್ತಲೇ ಎಚ್ಚೆತ್ತುಕೊಂಡಿರುವ ಬಿಜೆಪಿ ಸರ್ಕಾರ, ದಾಸೋಹ ಯೋಜನೆಗೆ ತಕ್ಷಣ 18 ಕೋಟಿ ಬಿಡುಗಡೆ ಮಾಡಲು ನಿರ್ಧರಿಸಿದೆ. ದಾಸೋಹ ಯೋಜನೆಯಡಿ 32,700 ಮಕ್ಕಳಿಗೆ 351 ಕಲ್ಯಾಣ ಸಂಸ್ಥೆಗಳ ಮೂಲಕ ಉಚಿತ ಅಕ್ಕಿ, ಗೋಧಿಯನ್ನು ಒಂದು ವರ್ಷದ ಅವಧಿಗೆ ವಿತರಿಸಲು ಮಂಗಳವಾರ ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ನಿರ್ಧರಿಸಿದೆ.

**ಕಾಂಗ್ರೆಸ್ ಆಕ್ರೋಶ:** ದಾಸೋಹ ಯೋಜನೆಯನ್ನು ಸಿದ್ದರಾಮಯ್ಯ ಸರ್ಕಾರದ ಅವಧಿಯಲ್ಲಿ ಜಾರಿಗೆ ತರಲಾಗಿತ್ತು. ಹೀಗಾಗಿ, ಮಂಗಳವಾರ ಮಧ್ಯಾಹ್ನ ಮಾಜಿ ಸಚಿವ ಯು.ಟಿ. ಖಾದರ್, ಪತ್ರಿಕಾಗೋಷ್ಠಿ ನಡೆಸಿ ಈ ವಿಚಾರ ಬಹಿರಂಗಗೊಳಿಸಿದ್ದರು. ಜತೆಗೆ ಬಡವರು, ನಿರ್ಗತಿಕರ ಬಗ್ಗೆ ಕರುಣೆ-ಮಾನವೀಯತೆ ಇಲ್ಲದ ಬಿಜೆಪಿ ಸರ್ಕಾರ ದಾಸೋಹ ಯೋಜನೆ ಸ್ಥಗಿತಗೊಳಿಸಿದೆ ಎಂದು ಆರೋಪಿಸಿದ್ದರು.

**ಆಹಾರ ಸಚಿವೆ ವಿರುದ್ಧ ಸಿಎಂ ಗರಂ?:** ಯೋಜನೆಯ ಗೊಂದಲದ ಹಿನ್ನೆಲೆಯಲ್ಲಿ ಆಹಾರ ಸಚಿವೆ ಶಶಿಕಲಾ ಜೊಲ್ಲೆ ಅವರನ್ನು ಸಿಎಂ ಬಿ.ಎಸ್. ಯಡಿಯೂರಪ್ಪ ತರಾಟೆಗೆ ತೆಗೆದುಕೊಂಡರು ಎಂದು ಹೇಳಲಾಗಿದೆ.

▶ 10ನೇ ಪುಟಕ್ಕೆ



ಶ್ರೀ ಸಿದ್ಧಗಂಗಾ ಮಠಕ್ಕೆ ಉಚಿತವಾಗಿ ಸರ್ಕಾರ ನೀಡುತ್ತಿದ್ದ ಅಕ್ಕಿ, ಗೋಧಿಯನ್ನು ತಡೆ ಹಿಡಿದಿರೋದು ನಿಜ. ಉತ್ತರ ಭಾರತದಲ್ಲಿ ಈ ಯೋಜನೆ ದುರುಪಯೋಗ ಆಗುತ್ತಿದೆ ಎಂಬ ಆರೋಪವಿದೆ. ಪುನಃ ಆರಂಭಿಸುವಂತೆ ಕರ್ನಾಟಕ ಸರ್ಕಾರಕ್ಕೆ ಪತ್ರ ಬರೆದಿದ್ದೇವೆ. ಕೇಂದ್ರಕ್ಕೂ ಮನವಿ ಮಾಡಲಾಗಿದೆ.

• ಶ್ರೀ ಸಿದ್ಧಲಿಂಗ ಮಹಾ ಸ್ವಾಮೀಜಿ, ಸಿದ್ಧಗಂಗಾ ಮಠಾಧ್ಯಕ್ಷರು

ಅನ್ನಭಾಗ್ಯದ ಅಕ್ಕಿ, ಗೋಧಿಯನ್ನು ಬುಧವಾರದಿಂದಲೇ ಪೂರೈಸಲಿದ್ದೇವೆ. ಈ ಹಿಂದೆ ಪೂರೈಕೆಯಾಗುತ್ತಿದ್ದ ಪ್ರಮಾಣದಲ್ಲಿಯೇ ಅಕ್ಕಿ, ಗೋಧಿಗಳ ಪೂರೈಕೆಯನ್ನು ಆರಂಭಿಸುತ್ತೇವೆ.

• ಬಿ.ಎಸ್. ಯಡಿಯೂರಪ್ಪ, ಮುಖ್ಯಮಂತ್ರಿ